ಇ) ಸಿ.ಎಸ್.ಪುರ ಹೋಬಳಿಯ ಎಲ್ಲಾ ಗ್ರಾಮಗಳಿಗೂ ಶುದ್ಧ ಕುಡಿಯುವ ನೀರಿನ ಯೋಜನೆ ಎಂದು ಪೂರ್ಣಗೊಳಿಸಲಾಗುವುದು?

ಶ್ರೀ ಜದೀಶ್ ಶೆಟ್ಟರ್(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ),ಆ)&ಇ) ತುಮಕೂರು ಜಿಲ್ಲೆ ತುರುವೇಕೆರೆ ಮತಕ್ಷೇತ್ರದ, ಸಿ.ಎಸ್.ಪುರ ಮತ್ತಿತರೆ 34 ಗ್ರಾಮಗಳಿಗೆ ಶುದ್ಧ ಕುಡಿಯುವ ನೀರು ಪೂರೈಕೆ ಮಾಡಲು ರೂ.10.00 ಕೋಟಿ ಅಂದಾಜಿನ ಯೋಜನೆಗೆ ದಿನಾಂದ 26–6–2010 ರಂದು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಕರ್ನಾಟಕ ಪಾರದರ್ಶಕ ನೀತಿಯನ್ವಯ ಯೋಜನೆ ಅನುಷ್ಠಾನ ಕೈಗೊಂಡು ಮಾರ್ಚ್ 2012ರೊಳಗೆ ಯೋಜನಾ ಕಾಮಗಾರಿಗಳನ್ನು ಪೂರ್ಣಗೊಳಿಸಲುದ್ದೇಶಿಸಲಾಗಿದೆ.

ರಾಜ್ಯದಲ್ಲಿ ಇಂಜಿನಿಯರ್ ಕಾಲೇಜ್ ಸ್ಥಾಪನೆ

45(281) ಶ್ರೀ ಅಪ್ಪಾಜಿ ಚನ್ನಬಸವರಾಜ್ ಶಂಕರರಾವ್ ನಾಡಗೌಡ:(ಮುದ್ದೇಬಿಹಾಳ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಸರ್ಕಾರಿ ಇಂಜನಿಯರಿಂಗ್ ಕಾಲೇಜುಗಳ ಸಂಖ್ಯೆ ಎಷ್ಟು?

ಆ) ಮುದ್ದೇಬಿಹಾಳಕ್ಕೆ ಇಂಜನಿಯರಿಂಗ್ ಕಾಲೇಜು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಮುದ್ದೇಬಿಹಾಳಕ್ಕೆ ಸರ್ಕಾರಿ ಇಂಜನಿಯರಿಂಗ್ ಕಾಲೇಜು ಪ್ರಾರಂಭಿಸುವ ಉದ್ದೇಶ ಸರ್ಕಾರಕ್ಕಿದೆಯೇ;?

ಈ) ಹಾಗಿದ್ದಲ್ಲಿ ಎಂದು ಪ್ರಾರಂಭಿಸಲಾಗುವುದು?

ಶ್ರೀ ಅರವಿಂದ ಲಿಂಬಾವಳಿ(ಉನ್ನತ ಶಿಕ್ಷಣ ಸಚಿವರು)

ಅ) 14 (ಹದಿನಾಲ್ಕು)

ಆ) ಬಂದಿದೆ

ಇ) ಇಲ್ಲ

ಈ) ಉದ್ಭವಿಸುವುದಿಲ್ಲ

ಕರ್ನಾಟಕ ವಿಧಾನ ಸಭೆ

ಶುಕ್ರವಾರ, 2ನೇ ಜುಲೈ 2010ರಂದು ಸದನವು ವಿಧಾನ ಸೌಧದಲ್ಲಿರುವ

ವಿಧಾನ ಸಭೆಯ ಸಭಾಂಗಣದಲ್ಲಿ ಬೆಳಿಗ್ಗೆ 10 ಗಂಟೆ 10 ನಿಮಿಷಕ್ಕೆ

ಸಮಾವೇಶಗೊಂಡಿತ್ತು.

ಅಧ್ಯಕ್ಷರು ಶ್ರೀ ಕೆ.ಜಿ.ಬೋಪಯ್ಯರವರು ಪೀಠವನ್ನು ಅಲಂಕರಿಸಿದ್ದರು